# ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಕಾವೇರಿ ಭವನ, 6ನೇ ಮಹಡಿ, ಕೆ.ಹೆಚ್.ಬಿ.ಕಾಂಪ್ಲೆಕ್ಸ್, ಕೆ.ಜಿ.ರಸ್ತೆ, ಬೆಂಗಳೂರು-560 009.

**ಸಂಖ್ಯೆ: ಡಿಪಿಎನ್:ನೇ.ಸ:10:2019-20,ಬೆಂಗಳೂರು.** **ದಿನಾಂಕ: 30- 09-2019**

## ::ಅಧಿಸೂಚನೆ::

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಹೈದರಾಬಾದ್-ಕರ್ನಾಟಕ ಮೀಸಲಾತಿ ಅಡಿಯಲ್ಲಿ ಗುರುತಿಸಲಾದ **24** ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಈ ಅಧಿಸೂಚನೆ ಅನುಸಾರ **ಅನ್ ಲೈನ್ (ON-LINE)** ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಸದರಿ ನೇಮಕಾತಿ ಕುರಿತು ವಿವರಗಳು ಈ ಕೆಳಗಿನಂತಿವೆ.

**1.ಹುದ್ದೆಯ ಹೆಸರು, ಹುದ್ದೆಗಳ ಸಂಖ್ಯೆ ಮತ್ತು ಅರ್ಹತೆ:-**

| ಕ್ರ.ಸಂ<br>Sl No. | ಹುದ್ದೆಯ ಹೆಸರು<br>Name of the Post | ಹುದ್ದೆಗಳ ಸಂಖ್ಯೆ<br>No. of Vacancies | ಅರ್ಹತೆ<br>Eligibility |
|---|---|---|---|
| 1. | ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು<br>Assistant Public Prosecutor-cum-Assistant Government Pleader | 24 | ಸಂವಿಧಾನದ ಅನುಚ್ಛೇದ 371(ಜೆ)ರಲ್ಲಿ ಉಲ್ಲೇಖಿಸಿದಂತೆ, ಹೈದರಾಬಾದ್-ಕರ್ನಾಟಕ ನಿವಾಸಿಯಾಗಿ ಸಕ್ಷಮ ಪ್ರಾಧಿಕಾರದಿಂದ ಆ ನಿಟ್ಟಿನಲ್ಲಿ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರ ಪಡೆದ ಹಾಗೂ ಭಾರತೀಯ ವಕೀಲರ ಕಾಯ್ದೆ 1961 ರಂತೆ ಭಾರತ ದೇಶದ ಸಿವಿಲ್ ಮತ್ತು ಕ್ರಿಮಿನಲ್ ನ್ಯಾಯಾಲಯಗಳಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಕನಿಷ್ಠ 3 ವರ್ಷ ವಕೀಲಿ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿರಬೇಕು.<br>Must be a resident of Hyderabad-Karnataka as refered in Article 371(J) of Constitution and should possess a certificate in prescribed form issued by the competent authority.<br>Must be an Advocate under the provisions of the Advocates Act,1961.<br>Must be practicing as an Advocate in courts of Civil and Criminal Jurisdiction in India and must have so practiced for not less than 3 years as on the last date fixed for submission of application. |

**2.ಹುದ್ದೆಗಳ ಮೀಸಲಾತಿ ವರ್ಗೀಕರಣ:-**

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಒಇ 460 ಪಿಪಿಇ 2014, ದಿನಾಂಕ:17.03.2015 ರ ಪ್ರಕಾರ ರಾಜ್ಯವ್ಯಾಪಿ ಸ್ಥಳೀಯ ವೃಂದಕ್ಕೆ ಶೇ.8 ರಷ್ಟು ಹುದ್ದೆಗಳನ್ನು ಹಾಗೂ ಪ್ರಾದೇಶಿಕ ಸ್ಥಳೀಯ ವೃಂದಕ್ಕೆ ಶೇ.80 ರಷ್ಟು ಹುದ್ದೆಗಳನ್ನು ಮೀಸಲಿರಿಸಿ ಅಧಿಸೂಚಿಸಲಾಗಿರುತ್ತದೆ. ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ವೃಂದದಲ್ಲಿ ರಾಜ್ಯವ್ಯಾಪಿ ಸ್ಥಳೀಯ ವೃಂದಕ್ಕೆ ಒಂದು ಹುದ್ದೆ ಹಾಗೂ ಪ್ರಾದೇಶಿಕ ಸ್ಥಳೀಯ ವೃಂದಕ್ಕೆ 44 ಹುದ್ದೆಗಳನ್ನು ಮೀಸಲಿರಿಸಿದ್ದು, ಪ್ರಾದೇಶಿಕ ಸ್ಥಳೀಯ ವೃಂದಕ್ಕೆ ಈ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 21 ಅಧಿಕಾರಿಗಳು ಇಚ್ಛಾ ಪತ್ರ ಸಲ್ಲಿಸಿದ್ದು, ಅವರಿಗೆ ಹಂಚಿಕೆ ಮಾಡಿ ಉಳಿದ ರಾಜ್ಯವ್ಯಾಪಿ ಸ್ಥಳೀಯ ವೃಂದದ 01 ಹುದ್ದೆ ಹಾಗೂ ಪ್ರಾದೇಶಿಕ ಸ್ಥಳೀಯ ವೃಂದದ 23 ಹುದ್ದೆಗಳು ಒಟ್ಟು 24 ಹುದ್ದೆಗಳನ್ನು ಭರ್ತಿಮಾಡಲು ಅಧಿಸೂಚಿಸಲಾಗಿರುತ್ತದೆ.

**ಕೋಷ್ಟಕ-01 ( 17 REGULAR ROSTER)**

| ವಿವರಗಳು | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ | ಅಂಗವಿಕಲ | ಒಟ್ಟು |
|---|---|---|---|---|---|---|---|
| ಸಾಮಾನ್ಯ ವರ್ಗ | - | 04 | 01 | 02 | - | - | **07** |
| ಪರಿಶಿಷ್ಟ ಜಾತಿ | - | 01 | - | 01 | - | 01 (ಸಾಮಾನ್ಯ)(ದೃಷ್ಟಿಮಾಂದ್ಯ) | **03** |
| ಪರಿಶಿಷ್ಟ ಪಂಗಡ | - | 01 | - | - | - | - | **01** |
| ಪ್ರವರ್ಗ-I | - | - | - | - | - | - | **-** |
| ಪ್ರವರ್ಗ-IIA | 01 | 01 | - | 01 | - | 01 (ಸಾಮಾನ್ಯ)(ದೃಷ್ಟಿಮಾಂದ್ಯ) | **04** |
| ಪ್ರವರ್ಗ -IIB | - | 01 | - | - | - | - | **01** |
| ಪ್ರವರ್ಗ-IIIA | - | - | - | - | - | - | **-** |
| ಪ್ರವರ್ಗ-IIIB | - | 01 | - | - | - | - | **01** |
| **ಒಟ್ಟು** | **01** | **09** | **01** | **04** | **-** | **02** | **17** |

**ಕೋಷ್ಟಕ-02 (07 MISSING POINTS)**

| ವಿವರಗಳು | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ | ಒಟ್ಟು |
|---|---|---|---|---|---|---|
| ಸಾಮಾನ್ಯ ವರ್ಗ | - | 01 | 01 | 02 | - | **04** |
| ಪರಿಶಿಷ್ಟ ಜಾತಿ | - | 01 | - | - | - | **01** |
| ಪರಿಶಿಷ್ಟ ಪಂಗಡ | - | - | - | - | - | **-** |
| ಪ್ರವರ್ಗ-I | - | - | - | - | - | **-** |
| ಪ್ರವರ್ಗ-IIA | - | - | - | - | - | **-** |
| ಪ್ರವರ್ಗ-IIB | 01 | - | - | - | - | **01** |
| ಪ್ರವರ್ಗ-IIIA | 01 | - | - | - | - | **01** |
| ಪ್ರವರ್ಗ-IIIB | - | - | - | - | - | **-** |
| **ಒಟ್ಟು** | **02** | **02** | **01** | **02** | **-** | **07** |

**ಟಿಪ್ಪಣಿ:-**

(1) ಹೈದರಾಬಾದ್-ಕರ್ನಾಟಕ ವ್ಯಾಪ್ತಿಗೆ ಸಂಬಂಧಿಸಿದಂತೆ ( 371 (ಜೆ) ) ರಾಜ್ಯವ್ಯಾಪಿ 01 ಹುದ್ದೆ ಹಾಗೂ ಸ್ಥಳೀಯ ಪ್ರಾದೇಶಿಕ ವೃಂದದಲ್ಲಿ 23 ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ.

(2) ಕಲಂ 371-ಜೆ ಪ್ರಕಾರ ಪ್ರಾದೇಶಿಕ ಸ್ಥಳೀಯ ವೃಂದಕ್ಕೆ ಸೇರಲು 21 ಅಧಿಕಾರಿಗಳು ಇಚ್ಛಾ ಪತ್ರ ಸಲ್ಲಿಸಿದ್ದು, ಅವರುಗಳಲ್ಲಿ 14 ಅಧಿಕಾರಿಗಳನ್ನು ಅವರುಗಳು ಪ್ರತಿನಿಧಿಸುವ ಪ್ರವರ್ಗಕ್ಕೆ ಹಂಚಿಕೆ ಮಾಡಿದ ನಂತರ 7 ರೋಸ್ಟರ್ ಬಿಂದುಗಳು ಹೆಚ್ಚುವರಿಯಾಗಿದ್ದು ಅವುಗಳನ್ನು ಸರಿದೂಗಿಸಲಾಗಿದೆ.

**ವಿಶೇಷ ಸೂಚನೆ:**

1. ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ, ಮುದ್ದಾಂ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶ ಇರುವುದಿಲ್ಲ.
2. ಅಭ್ಯರ್ಥಿಗಳು ಆನ್ ಲೈನ್ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡುವ ಮುನ್ನ ಈ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಸೂಚನೆಗಳನ್ನು ಸರಿಯಾಗಿ ಓದಿ ತಿಳಿದುಕೊಂಡು ನಂತರ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.
3. ಅಭ್ಯರ್ಥಿಗಳು ತಪ್ಪು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಜಾರಿಯಲ್ಲಿರುವ ಕಾನೂನಿನನ್ವಯ ಕ್ರಮ ಕೈಗೊಳ್ಳಲಾಗುವುದು.

**3.ನೇಮಕಾತಿ ವಿಧಾನ:-**

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು-2012 ರ ಪ್ರಕಾರ ಅರ್ಹ ಅಭ್ಯರ್ಥಿಗಳನ್ನು ಈ ಉದ್ದೇಶಕ್ಕಾಗಿ ರಚಿಸಲಾದ ಆಯ್ಕೆ ಸಮಿತಿಯ ನಿರ್ಣಯಗಳಂತೆ ಲಿಖಿತ ಪರೀಕ್ಷೆಗಳು ಮತ್ತು ಮೌಖಿಕ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

ಸರ್ಕಾರವು ವಿವಿಧ ಸಂದರ್ಭಗಳಲ್ಲಿ ಹೊರಡಿಸಿರುವ ಆದೇಶ/ಅಧಿಸೂಚನೆ /ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಮೀಸಲಾತಿ ನಿಯಮಗಳನ್ನು ಅನುಸರಿಸಿ ಮೀಸಲಿಟ್ಟ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಅಧಿಸೂಚಿಸಲಾಗಿರುವ ಹುದ್ದೆಗಳಿಗೆ ಸಂಬಂಧಿಸಿದಂತೆ, ಸ್ಪರ್ಧಾತ್ಮಕ ಪ್ರಾಥಮಿಕ ಪರೀಕ್ಷೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಶೇ.35 ರಷ್ಟು ಅಂಕಗಳನ್ನು ಹಾಗೂ ಸಾಮಾನ್ಯ ಹಾಗೂ ಇತರೆ ವರ್ಗದ ಅಭ್ಯರ್ಥಿಗಳು ಶೇ.40 ರಷ್ಟು ಅಂಕಗಳನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಗಳು 1:10 ರ ಅನುಪಾತದಲ್ಲಿ ಮುಖ್ಯ ಪರೀಕ್ಷೆಗೆ ಅರ್ಹರಾಗುತ್ತಾರೆ.

ಮುಖ್ಯ ಪರೀಕ್ಷೆಗೆ ಅರ್ಹರಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಶೇ.35 ರಷ್ಟು ಅಂಕಗಳನ್ನು ಹಾಗೂ ಸಾಮಾನ್ಯ ಹಾಗೂ ಇತರೆ ವರ್ಗದ ಅಭ್ಯರ್ಥಿಗಳು ಶೇ.40 ರಷ್ಟು ಅಂಕಗಳನ್ನು ಮುಖ್ಯಪರೀಕ್ಷೆಯಲ್ಲಿ ಪಡೆದಲ್ಲಿ ಅಂತಹ ಅಭ್ಯರ್ಥಿಗಳು 1:3 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಅರ್ಹರಾಗುತ್ತಾರೆ. ಮೌಖಿಕ ಸಂದರ್ಶನಕ್ಕೆ ಗರಿಷ್ಠ 25 ಅಂಕಗಳನ್ನು ನಿಗದಿಪಡಿಸಲಾಗಿದೆ.

ಮೌಖಿಕ ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಯು, ಸದರಿ ಮೌಖಿಕ ಸಂದರ್ಶನಕ್ಕೆ ಗೈರು ಹಾಜರಾದಲ್ಲಿ ಅವರನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಇಬ್ಬರು ಅಥವಾ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕಗಳನ್ನು ಗಳಿಸಿದರೆ, ಅಂಕಗಳ ಅರ್ಹತಾ ಪಟ್ಟಿ ತಯಾರಿಸುವಾಗ ಅಂತಹ ಅಭ್ಯರ್ಥಿಗಳ ಅರ್ಹತೆಯನ್ನು ವಯಸ್ಸಿನ ಜೇಷ್ಠತೆಯಲ್ಲಿ ಹಿರಿಯರಾದವರನ್ನು ಪ್ರಾಶಸ್ತ್ಯದಲ್ಲಿ ಪರಿಗಣಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 10 ಸೇನೆನಿ 2019, ಬೆಂಗಳೂರು, ದಿನಾಂಕ:17.07.2019ರ ಅನುಸಾರ ಆಯ್ಕೆಯಾದ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರ, ಹಾಗೂ ಇನ್ನಿತರೆ ದಾಖಲಾತಿಗಳ ಜೊತೆಗೆ ಅಭ್ಯರ್ಥಿಗಳು ಸಲ್ಲಿಸುವ ಅಂಕಪಟ್ಟಿಗಳು/ಶೈಕ್ಷಣಿಕ ಪ್ರಮಾಣ ಪತ್ರಗಳ ನೈಜತೆಯನ್ನು ಅವುಗಳನ್ನು ವಿತರಿಸಿದ ವಿಶ್ವವಿದ್ಯಾಲಯಗಳು/ಶೈಕ್ಷಣಿಕ ಪರೀಕ್ಷಾ ಮಂಡಳಿಗಳೊಂದಿಗೆ ಪರಿಶೀಲನೆ ಮಾಡಿದ ನಂತರವೇ ನೇಮಕಾತಿಗೆ ಪರಿಗಣಿಸಲಾಗುವುದು. ಅಲ್ಲದೇ ವಕೀಲರ ಪರಿಷತ್ತಿನಿಂದ ಪಡೆದ ಸನ್ನದಿನ ನೈಜತೆಯ ಬಗ್ಗೆ ಸಹ ಮೇಲಿನಂತೆಯೇ ಕ್ರಮ ಕೈಗೊಳ್ಳಲಾಗುವುದು.

**ವಿ.ಸೂ:-** 1) ಎಲ್ಲಾ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿರುತ್ತವೆ. ಅಭ್ಯರ್ಥಿಗಳು ಉತ್ತರ ಪತ್ರಿಕೆಯನ್ನು ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಬರೆಯಬಹುದಾಗಿರುತ್ತದೆ.

2)ಯಾವುದೇ ಒಂದು ಉತ್ತರ ಪತ್ರಿಕೆಯನ್ನು ಸಂಪೂರ್ಣವಾಗಿ ಒಂದೇ ಭಾಷೆಯಲ್ಲಿ ಉತ್ತರಿಸಬೇಕು.

3)ಮೌಖಿಕ ಸಂದರ್ಶನದಲ್ಲಿ ಕೇಳುವ ಪ್ರಶ್ನೆಗಳಿಗೆ ಅಭ್ಯರ್ಥಿಗಳು ಕನ್ನಡ/ಆಂಗ್ಲಭಾಷೆಯಲ್ಲಿ ಉತ್ತರಿಸಬಹುದು.

4) ಮೌಖಿಕ ಸಂದರ್ಶನದ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರಾಗಿ ನೇಮಕಗೊಳ್ಳಲು ಅಭ್ಯರ್ಥಿಗೆ ಇರಬೇಕಾದ ಸಾಮಾನ್ಯ ಜ್ಞಾನ, ಕಾನೂನಿನ ಅಂಶಗಳನ್ನು ಗ್ರಹಿಸುವ ಶಕ್ತಿ ಮತ್ತು ತಿಳುವಳಿಕೆ ಹಾಗೂ ಅರ್ಹತೆಯನ್ನು ಪರೀಕ್ಷಿಸಲಾಗುವುದು.

**4. ಸ್ಪರ್ಧಾತ್ಮಕ ಪರೀಕ್ಷೆ:-** ಸ್ಪರ್ಧಾತ್ಮಕ ಪರೀಕ್ಷೆಯು ಪ್ರಾಥಮಿಕ ಪರೀಕ್ಷೆ, ಮುಖ್ಯ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನವನ್ನು ಒಳಗೊಂಡಿರುತ್ತದೆ.

**ಅ)ಪ್ರಾಥಮಿಕ ಪರೀಕ್ಷೆಯ ವಿಷಯಗಳ ವಿವರಗಳು:-**

| ಪತ್ರಿಕೆ<br>Paper | ವಿಷಯ<br>Subject | ಅಂಕಗಳು<br>Marks | ಪರೀಕ್ಷಾ ಅವಧಿ<br>Duration of examination | ಪರೀಕ್ಷಾ ವಿಧಾನ<br>Pattren of Examination |
|---|---|---|---|---|
| 1. | **The Syllabi for Preliminary examination:**<br>i) Paper-1 Part-I*<br>Aptitude test containing questions on comprehension and Proficiency in English and Kannada. | 50 | 1 hour & 30 minutes | Objective Type |
| | ii)Paper-1 Part-II<br>General knowledge- Test of reasoning and mental ability. | 50 | 1 hour & 30 minutes | Objective Type. |
| 2. | iii) Paper-2<br>Code of civil procedure 1908<br>Cyber Law<br>Transfer of property Act,1882.<br>Indian Contract Act,1872.<br>Specific Relief Act,1963.<br>Indian Constitution<br>Limitation Act.<br>Code of Criminal Procedure-1973.<br>Indian Penal Code-1860.<br>Indian Evidence Act,1872. | 100 | 3 hours | Objective Type |

***ಟಿಪ್ಪಣಿ:- ಪೇಪರ್ -1ರ ಪಾರ್ಟ್-1 ಮತ್ತು ಪಾರ್ಟ್-2 ಪರೀಕ್ಷೆಗಳನ್ನು ಏಕಕಾಲದಲ್ಲಿ ನಡೆಸಲಾಗುವುದು.**

**ಆ)ಮುಖ್ಯ ಪರೀಕ್ಷೆಯ ವಿಷಯಗಳ ವಿವರಗಳು :**

| ಪತ್ರಿಕೆ<br>Paper | ವಿಷಯ<br>Subject | ಅಂಕಗಳು<br>Marks | ಪರೀಕ್ಷಾ ಅವಧಿ<br>Duration of exam | ಪರೀಕ್ಷಾ ವಿಧಾನ<br>Pattren of Exam |
|---|---|---|---|---|
| 1. | The Syllabi for Main examination<br>i) **Law Paper-I**<br>(i) Framing of issues.<br>ii) Framing of charges.<br>(iii) Principles of Pleading.<br>(iv) Drafting of pleadings. | 100 | 3 hours | Essay Type |
| 2. | ii) **Law Paper-II**<br>(i) Code of Criminal procedure -1973.<br>(ii) Indian Evidence Act,1872.<br>(iii) Indian Penal Code-1860. | 100 | 3 hours | Essay Type |
| 3. | iii) **Law Paper-III**<br>(i) Constituion of India.<br>(ii) Cyber laws.<br>(iii) Code of Civil Procedure-1908. | 100 | 3 hours | Essay Type |

ಸ್ಪರ್ಧಾತ್ಮಕ ಪ್ರಾಥಮಿಕ ಪರೀಕ್ಷೆಯನ್ನು ಬೆಂಗಳೂರು/ ರಾಜ್ಯದ ಇನ್ನಾವುದೇ ಜಿಲ್ಲೆಗಳಲ್ಲಿ ನಡೆಸುವ ಅಧಿಕಾರ ವ್ಯಾಪ್ತಿಯನ್ನು ನೇಮಕಾತಿ ಸಮಿತಿ ಹೊಂದಿರುತ್ತದೆ. ಪ್ರಾಥಮಿಕ ಪರೀಕ್ಷೆಯ ವೇಳಾಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಇಲಾಖೆಯೊಂದಿಗೆ ಸಮಾಲೋಚಿಸಿ ನಿಗದಿಪಡಿಸುವುದು. ಈ ಮಾಹಿತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್ ಸೈಟ್ http://kea.kar.nic.in ಮತ್ತು ಅಭಿಯೋಗ ಇಲಾಖೆಯ ವೆಬ್ ಸೈಟ್ https://www.karnataka.gov.in/Prosecution ನಲ್ಲಿ ಪ್ರಕಟಿಸಲಾಗುವುದು. ಪರೀಕ್ಷೆಗಳ ದಿನಾಂಕಗಳನ್ನು ಅಧಿಸೂಚಿಸಿದಾಗ ಪ್ರವೇಶ ಪತ್ರಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಂತರ್ಜಾಲದಿಂದ http://kea.kar.nic.in ಅಭ್ಯರ್ಥಿಗಳು ಡೌನ್ ಲೋಡ್ ಮಾಡಿಕೊಳ್ಳುವುದು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಾಥಮಿಕ ಪರೀಕ್ಷೆಗಳನ್ನು ಆನ್ ಲೈನ್ ಅಥವಾ ಆಫ್ ಲೈನ್ ಮೂಲಕ ನಡೆಸುವ ಅಧಿಕಾರವನ್ನು ಕಾಯ್ದಿರಿಸಿಕೊಂಡಿರುತ್ತದೆ.

**5.ವೇತನ ಶ್ರೇಣಿ:-**

**ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಯ ವೇತನ ಶ್ರೇಣಿ:**

ರೂ.43100-1100-46400-1250-53900-1450-62600-1650-72500-1900-83900.

**6.ಪಿಂಚಣಿ ಸೌಲಭ್ಯ:-**

ಸರ್ಕಾರದ ಆದೇಶ ಸಂಖ್ಯೆ:ಎಫ್ ಡಿ(ಎಸ್ ಪಿ ಎಲ್) 04 ಪಿಇಟಿ 2005, ದಿನಾಂಕ: 31.03.2006 ರಂತೆ ಹೊಸ ಪಿಂಚಣಿ ಸೌಲಭ್ಯ ಪಡೆಯಲು ಅನ್ವಯವಾಗಿರುತ್ತದೆ.

**7.ಅರ್ಜಿ ಸಲ್ಲಿಸುವ ಬಗ್ಗೆ ಮಾಹಿತಿ -**

| | | |
|---|---|---|
| 1 | ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ : | **10-10-2019** |
| 2 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : | **08-11-2019** |

(ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು).

ನಿಗದಿತ ಶುಲ್ಕವನ್ನು ಕರ್ನಾಟಕದ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ (e-Payment Post Offices only) ಚಲನ್ ಮೂಲಕ ಪಾವತಿಸತಕ್ಕದ್ದು ಅಂಚೆ ಕಛೇರಿಯ ಚಲನ್ ಪ್ರತಿಯನ್ನು ಹೊರತುಪಡಿಸಿ, ಯಾವುದೇ ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಇನ್ನ್ಯಾವುದೇ ತರಹದ ಪಾವತಿಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ಸಾರಾ ಸಗಟಾಗಿ ತಿರಸ್ಕರಿಸಲಾಗುವುದು.

**ಅಂಚೆ ಇಲಾಖೆಯ ಸಹಾಯವಾಣಿ 080-22392668.**

**8. ನಿಗದಿತ ಅರ್ಜಿ ಶುಲ್ಕ**:- ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:-

(1) **ಪ್ರಾಥಮಿಕ ಪರೀಕ್ಷೆಗೆ ಪಾವತಿಸಬೇಕಾದ ಪರೀಕ್ಷಾ ಶುಲ್ಕದ ವಿವರ:-**

| **ವಿವರ** | **ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಯ ಪ್ರಾಥಮಿಕ ಪರೀಕ್ಷೆಯ ಶುಲ್ಕ.** |
|---|---|
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-I ರ ಅಭ್ಯರ್ಥಿಗಳಿಗೆ | ರೂ.400/- + 25 ಅಂಚೆ ಶುಲ್ಕ **= 425/-** |
| ಸಾಮಾನ್ಯ ವರ್ಗ ಹಾಗೂ ಇತರರಿಗೆ | ರೂ.800/- + 25 ಅಂಚೆ ಶುಲ್ಕ **= 825/-** |

ಪ್ರಾಥಮಿಕ ಪರೀಕ್ಷೆಗೆ ನಿಗದಿತ ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಲ್ಲದೇ ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಸಂದರ್ಭದಲ್ಲಿ ಮರು ಪಾವತಿಸಲಾಗುವುದಿಲ್ಲ.

**(2) ಮುಖ್ಯ ಪರೀಕ್ಷೆಗೆ ಪಾವತಿಸಬೇಕಾದ ಪರೀಕ್ಷಾ ಶುಲ್ಕದ ವಿವರ:**

ಮುಖ್ಯ ಪರೀಕ್ಷೆಗೆ ಪಾವತಿಸಬೇಕಾದ ಶುಲ್ಕ ಹಾಗೂ ಪರೀಕ್ಷಾ ಪ್ರಾಧಿಕಾರದ ವಿವರಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.

**9. ವಯೋಮಿತಿ**:-

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ ಈ ಕೆಳಕಂಡಂತೆ ವಯೋಮಿತಿ ನಿಗದಿಪಡಿಸಿದೆ.

| **ವರ್ಗ** | **ಗರಿಷ್ಠ ವಯೋಮಿತಿ** |
|---|---|
| ಸಾಮಾನ್ಯ ಅಭ್ಯರ್ಥಿಗಳಿಗೆ | 37 ವರ್ಷಗಳು |
| ಪ್ರವರ್ಗ-IIಎ IIಬಿ IIIಎ IIIಬಿ ಅಭ್ಯರ್ಥಿಗಳಿಗೆ | 40 ವರ್ಷಗಳು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-Iರ ಅಭ್ಯರ್ಥಿಗಳಿಗೆ | 42 ವರ್ಷಗಳು |

ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಮೂಲ ಪ್ರಮಾಣ ಪತ್ರ ಅಥವಾ ಜನ್ಮ ದಿನಾಂಕ ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗದಲ್ಲಿ (SSLC, Cumulative Record extract ನಲ್ಲಿರುವಂತೆ) ನಮೂದಿಸಿರುವ ಜನ್ಮ ದಿನಾಂಕವನ್ನು ಮಾತ್ರ ಪರಿಗಣಿಸಲಾಗುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

**ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 6 ರಂತೆ ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಗೆ ಗರಿಷ್ಠ ವಯೋಮಿತಿಯಲ್ಲಿ ಸಡಿಲಿಕೆಗೆ ಅವಕಾಶವಿದೆ.**

1) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.
2) ಅಭ್ಯರ್ಥಿಗಳು ನ್ಯಾಷನಲ್ ಕೆಡೆಟ್ ಕೋರ್ ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದಲ್ಲಿ ಅಂತಹ ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
3) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ ಗರಿಷ್ಠ ವಯೋಮಿತಿಗೆ 10 (ಹತ್ತು) ವರ್ಷಗಳ ಹೆಚ್ಚುವರಿ ಸಡಲಿಕೆಗೆ ಅವಕಾಶವಿದೆ.
4) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ ಗರಿಷ್ಠ ವಯೋಮಿತಿಗೆ 10 (ಹತ್ತು) ವರ್ಷಗಳ ಹೆಚ್ಚುವರಿ ಸಡಲಿಕೆಗೆ ಅವಕಾಶವಿದೆ.

ಮೇಲ್ಕಂಡಂತೆ ವಯೋಮಿತಿ ಸಡಿಲಿಕೆಗೆ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ/ದಾಖಲಾತಿಗಳನ್ನು ಅರ್ಜಿ ಸಲ್ಲಿಸುವ ಪೂರ್ವದಲ್ಲೇ ಪಡೆದಿಟ್ಟುಕೊಳ್ಳತಕ್ಕದ್ದು. ಪರಿಶೀಲನೆಯ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

**10. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:-**

ಮೀಸಲಾತಿ ಕೋರುವ ಅಭ್ಯರ್ಥಿಗಳು, ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು:-

| | | |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ-ಡಿ |
| ಆ) | ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ-ಇ |
| ಇ) | ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು | ನಮೂನೆ-ಎಫ್ |

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್ ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್ ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಮುಂಚಿತವಾಗಿ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಮೂಲ ದಾಖಲಾತಿಗಳ ಪರಿಶೀಲನೆಯ ಸಂದರ್ಭದಲ್ಲಿ ಈ ಮೇಲೆ ತಿಳಿಸಿರುವ ಪ್ರಮಾಣ ಪತ್ರಗಳ ಮೂಲ ದಾಖಲೆಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯನ್ನು ಮೀಸಲಾತಿ ಹುದ್ದೆಗೆ ಪರಿಗಣಿಸಲಾಗುವುದಿಲ್ಲ. ಆದರೆ ಆ ಅಭ್ಯರ್ಥಿಯು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು. ಮೇಲೆ ತಿಳಿಸಿದ ನಮೂನೆಗಳನ್ನು ಹೊರತುಪಡಿಸಿ,

ಪಡೆಯಲಾದ ಇತರೆ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರವರ್ಗ 2ಎ, 2ಬಿ, 3ಎ, 3ಬಿ ಗೆ ಸೇರಿದ ವಿವಾಹಿತ ಮಹಿಳೆಯರು ಜಾತಿ ಮತ್ತು ಆದಾಯ ಪ್ರಮಾಣ ಪತ್ರದಲ್ಲಿ ಪತಿ ಮತ್ತು ಅವರ ಸ್ವಂತ ಆದಾಯದ ಮೂಲಗಳನ್ನು ಮಾತ್ರ ಪರಿಗಣಿಸಲಾಗಿರುವ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು. ತಂದೆಯ ಅಥವಾ ಕುಟುಂಬದ ಇತರೆ ಸದಸ್ಯರಿಗೆ ಸಂಬಂಧಿಸಿದಂತೆ ನೀಡಿದ ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

**(ಮೇಲ್ಕಂಡ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯೊಂದಿಗೆ ಲಗತ್ತಿಸಲಾಗಿದೆ.)**

**11. ವಕೀಲಿ ವೃತ್ತಿ ನಡೆಸುತ್ತಿರುವ ಬಗ್ಗೆ ಪ್ರಮಾಣ ಪತ್ರ ನೀಡುವ ಸಕ್ಷಮ ಪ್ರಾಧಿಕಾರ:-**

ಅಭ್ಯರ್ಥಿಗಳು, ವಕೀಲಿ ವೃತ್ತಿಯ ಸೇವಾ ಅವಧಿಯನ್ನು ದೃಢೀಕರಿಸಲು ತಮ್ಮ ನ್ಯಾಯವಾದಿಗಳ ಸಂಘದ ಸೇವಾ ಪ್ರಮಾಣ ಪತ್ರದ ಜೊತೆ ಈ ಕೆಳಗಿನ ಸಕ್ಷಮ ಪ್ರಾಧಿಕಾರದಿಂದ ನ್ಯಾಯವಾದಿ ವೃತ್ತಿಯಲ್ಲಿರುವ ಬಗ್ಗೆ ಪ್ರಮಾಣ ಪತ್ರ ಪಡೆದಿರಬೇಕು. ಪ್ರಮಾಣ ಪತ್ರದ ನಮೂನೆಯನ್ನು ಈ ಅಧಿಸೂಚನೆಯೊಂದಿಗೆ ಲಗತ್ತಿಸಿದೆ.

| ಕ್ರಮ ಸಂಖ್ಯೆ | ಅಭ್ಯರ್ಥಿಗಳ ವರ್ಗ | ಸಕ್ಷಮ ಪ್ರಾಧಿಕಾರ |
|---|---|---|
| 01 | ಉಚ್ಛ ನ್ಯಾಯಾಲಯಗಳಲ್ಲಿ ವಕೀಲಿ ವೃತ್ತಿ ಮಾಡುತ್ತಿರುವ ವಕೀಲರುಗಳಿಗೆ | ಉಚ್ಛ ನ್ಯಾಯಾಲಯಗಳ ಮಾನ್ಯ ರಿಜಿಸ್ಟ್ರಾರ್ |
| 02 | ಇತರೆ ನ್ಯಾಯಾಲಯಗಳಲ್ಲಿ ವಕೀಲಿ ವೃತ್ತಿ ಮಾಡುತ್ತಿರುವ ವಕೀಲರುಗಳಿಗೆ | ಅಭ್ಯರ್ಥಿಯು ವಕೀಲಿ ವೃತ್ತಿ ಮಾಡುತ್ತಿರುವ ನ್ಯಾಯಾಲಯದ ಮಾನ್ಯ ಪೀಠಾಧಿಕಾರಿಗಳು (ಪ್ರಿಸೈಡಿಂಗ್ ಆಫೀಸರ್) |

**12. ಸಂವಿಧಾನದ ಅನುಚ್ಛೇದ 371 (ಜೆ) ರನ್ವಯ ಹೈದರಾಬಾದ್ -ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:-**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ -ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಗೆ ಸ್ಥಳೀಯ ವ್ಯಕ್ತಿಯೆಂದು ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ-II ಸಂಖ್ಯೆ:ಡಿಪಿಎಆರ್ 43 ಹೆಚ್ ಕೆಸಿ 2013, ದಿನಾಂಕ :29-01-2014 ರಲ್ಲಿ ಸೂಚಿಸಿರುವ ನಮೂನೆಗಳಲ್ಲಿ ಅರ್ಹತಾ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಭ್ಯರ್ಥಿಗಳು ದಾಖಲೆಗಳ ಪರಶೀಲನೆಯ ಸಂದರ್ಭದಲ್ಲಿ ಮೂಲ ಅರ್ಹತಾ ಪ್ರಮಾಣ ಪತ್ರಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ಈ ಪ್ರಮಾಣ ಪತ್ರಗಳ ನಿಗದಿತ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**(ಸದರಿ ನಮೂನೆಗಳನ್ನು ಈ ಅಧಿಸೂಚನೆಗೆ ಲಗತ್ತಿಸಿದೆ.)**

**13. ಗ್ರಾಮೀಣ ಅಭ್ಯರ್ಥಿ:-**

ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 59 ಶಾಸನ 2000, ದಿನಾಂಕ: 06-01-2001ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು, ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೇನೆನಿ 2001, ದಿನಾಂಕ: 13-02-2001ರನ್ವಯ

ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲುರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ನಮೂನೆ-2ರಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಇರುವ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶೀಲನೆಯ ಸಂದರ್ಭದಲ್ಲಿ  ಮೂಲ ಪ್ರಮಾಣ ಪತ್ರಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ಮೂಲ ದಾಖಲಾತಿಗಳನ್ನು ಹಾಜರುಪಡಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿ ಆಧಾರದ ಹುದ್ದೆಗೆ ಪರಿಗಣಿಸಲಾಗುವುದಿಲ್ಲ. **(ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಗೆ ಲಗತ್ತಿಸಲಾಗಿದೆ.)**

**14. ಅಂಗವಿಕಲ ಅಭ್ಯರ್ಥಿ:-**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/48/ಸೆನೆನಿ 2012, ದಿ:10-06-2013 ರಲ್ಲಿ ಗ್ರೂಪ್ -ಬಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಸಮತಳ ಮೀಸಲಾತಿಯನ್ನು ಕಾರ್ಯಗತಗೊಳಿಸುವಾಗ ಅಂಗವಿಕಲರಿಗೆ ಪರಿಗಣಿಸಬೇಕಾದ ರೋಸ್ಟರ್ ಬಿಂದುಗಳ ಬಗ್ಗೆ ಸ್ಪಷ್ಟೀಕರಣ ನೀಡಲಾಗಿರುತ್ತದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಅಧಿಸೂಚನೆ ಸಂಖ್ಯೆ:wcd/348/PHP/2015, ದಿನಾಂಕ:26.07.2016ರ ಅನುಸೂಚಿ-1 ರಲ್ಲಿ ಈ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ವೃಂದದ ನೇಮಕಾತಿಗೆ ಮೀಸಲಾತಿಯನ್ನು ಕಲ್ಪಿಸಿ ಗುರುತಿಸಲಾಗಿರುತ್ತದೆ. ಅಧಿಸೂಚನೆಯ ಪ್ರತಿಯನ್ನು ಲಗತ್ತಿಸಿದೆ. ಈ ಅಧಿಸೂಚನೆಯಲ್ಲಿ ನಮೂದಿಸಿರುವಂತೆ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ದಿನಾಂಕ: 19-11-2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ ಪಿ 2010, ದಿನಾಂಕ: 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ / ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ / ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಯ ಸಂದರ್ಭದಲ್ಲಿ ಮೇಲಿನ ಪ್ರಮಾಣ ಪತ್ರದ ಮೂಲ ದಾಖಲೆಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳು ಮೀಸಲಾತಿಗೆ ಅರ್ಹರಾಗುವುದಿಲ್ಲ. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಯನ್ನು ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ. **( ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಗೆ ಲಗತ್ತಿಸಿದೆ**

**15. ಇತರ ಷರತ್ತುಗಳು:-**

1. ಅಭ್ಯರ್ಥಿಯು ಭಾರತೀಯ ನಾಗರೀಕನಾಗಿರತಕ್ಕದ್ದು.
2. ಭಾರತ ದೇಶಕ್ಕೆ ವಲಸೆ ಬಂದು ನೆಲೆಸಿರುವ ಅಭ್ಯರ್ಥಿಗಳಾಗಿದ್ದಲ್ಲಿ, ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ-5(ಇ)ರ ಪ್ರಕಾರ ಅಭ್ಯರ್ಥಿಯು ರಾಜ್ಯದ ಯಾವ ಜಿಲ್ಲೆಯ ಸಾಮಾನ್ಯ ನಿವಾಸಿಯಾಗಿರುವನೋ ಆ ಜಿಲ್ಲೆಯ ಜಿಲ್ಲಾಧಿಕಾರಿಗಳಿಂದ ವಲಸೆ ಬಂದ ದಿನಾಂಕವನ್ನೊಳಗೊಂಡಂತೆ ಅರ್ಹತಾ ಪ್ರಮಾಣ ಪತ್ರವನ್ನು ಪಡೆದಿರಬೇಕು.
3. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

4. ಸಹಾಯಕ ಸರ್ಕಾರಿ ಅಭಿಯೋಜಕರು-ಸಹಾಯಕ ಸರ್ಕಾರಿ ವಕೀಲರ ಹುದ್ದೆಯ ಕರ್ತವ್ಯಗಳನ್ನು ದಕ್ಷವಾಗಿ ನಿರ್ವಹಿಸಲು ಅಭ್ಯರ್ಥಿಯು ಮಾನಸಿಕ ಮತ್ತು ದೈಹಿಕ ಸದೃಢತೆ ಉಳ್ಳವರಾಗಿರಬೇಕು ಮತ್ತು ಅವರು ನೇಮಕಾತಿಯಾದ ಹುದ್ದೆಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
5. ಯಾವುದೇ ಅಭ್ಯರ್ಥಿಯು ಆಯ್ಕೆ ಹೊಂದಲು ಯಾವುದೇ ರೀತಿಯ ಬಾಹ್ಯ ಪ್ರಭಾವ ಬೀರಲು ಪ್ರಯತ್ನಿಸಿದರೆ/ ಅಕ್ರಮ ವೆಸಗಿದರೆ ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.
6. ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.
7. ಆಯ್ಕೆ ಸಮಿತಿಯು ಅಂಗವಿಕಲ ಕೋಟಾದಲ್ಲಿ ಆಯ್ಕೆ ಮಾಡಿದ ಅಭ್ಯರ್ಥಿಯು ವೈದ್ಯಕೀಯ ಮಂಡಳಿಯ ಮುಂದೆ ಹಾಜರಾದ ನಂತರ ಸದರಿ ಅಭ್ಯರ್ಥಿಯು ಪ್ರಸ್ತುತ ಅಧಿಸೂಚನೆಯಲ್ಲಿ ತಿಳಿಸಿರುವ ಅಂಗವೈಕಲ್ಯ ಹೊಂದಿರುವುದಿಲ್ಲ ಎಂದು ವೈದ್ಯಕೀಯ ಮಂಡಳಿಯು ಪ್ರಮಾಣೀಕರಿಸಿದ ಸಂದರ್ಭದಲ್ಲಿ ಸದರಿ ಅಭ್ಯರ್ಥಿಯು ಅಂಗವಿಕಲ ಕೋಟಾದಲ್ಲಿ ಅಯ್ಕೆಗೆ ಅರ್ಹರಾಗುವುದಿಲ್ಲ.
8. ಕೇಂದ್ರ /ಕರ್ನಾಟಕ / ಇತರೆ ರಾಜ್ಯಗಳ ಲೋಕಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಿರುವುದಿಲ್ಲ.
9. ನೈತಿಕ ದುರ್ನಡತೆಯಿಂದಾಗಿ/ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೆ ಒಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ /ಸ್ಥಳೀಯ ಸಂಸ್ಥೆ/ಕೈಗಾರಿಕಾ/ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ಇನ್ನಿತರೆ ಸರ್ಕಾರದ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ, ಕಾನೂನುಬಾಹಿರ/ನೀತಿಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಿರುವುದಿಲ್ಲ.
10. ಲಿಖಿತ ಪರೀಕ್ಷೆಗಳಿಗೆ/ಸಂದರ್ಶನಕ್ಕೆ/ದಾಖಲೆಗಳ ಪರಿಶೀಲನೆಗೆ ಸಂಬಂಧಿಸಿದಂತೆ ಹಾಜರಾಗುವ ಅಭ್ಯರ್ಥಿಗಳು ಯಾವುದೇ ರೀತಿಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆ ಪಡೆಯಲು ಅರ್ಹರಾಗುವುದಿಲ್ಲ.
11. ಸ್ಪರ್ಧಾತ್ಮಕ ಪರೀಕ್ಷೆ /ಮೌಖಿಕ ಸಂದರ್ಶನದ ದಿನಗಳಂದು ಅಭ್ಯಥಿಗಳು ಸ್ಪರ್ಧಾತ್ಮಕ ಪರೀಕ್ಷೆ/ಮೌಖಿಕ ಸಂದರ್ಶನಕ್ಕೆ ತಿಳಿಸಿದ ಸಮಯಕ್ಕಿಂತ ಸಾಕಷ್ಟು ಮುಂಚಿತವಾಗಿಯೇ ಸ್ಪರ್ಧಾತ್ಮಕ ಪರೀಕ್ಷೆ /ಮೌಖಿಕ ಸಂದರ್ಶನದ ಕೇಂದ್ರಗಳಲ್ಲಿ ಹಾಜರಿರುವುದು ಅಭ್ಯರ್ಥಿಗಳ ಹೊಣೆಗಾರಿಕೆಯಾಗಿರುತ್ತದೆ.
12. ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆ/ಮೌಖಿಕ ಸಂದರ್ಶನಕ್ಕೆ ಹಾಜರಾಗುವ ಸಂದರ್ಭದ ಪ್ರಯಾಣದಲ್ಲಿ ಯಾವುದೇ ರೀತಿಯ ಅಡಚಣೆಗಳುಂಟಾಗಿ ಸ್ಪರ್ಧಾತ್ಮಕ ಪರೀಕ್ಷೆ / ಮೌಖಿಕ ಸಂದರ್ಶನಕ್ಕೆ ಹಾಜರಾಗಲು ಅಸಾಧ್ಯವಾದ್ದಲ್ಲಿ ಅಥವಾ ವಿಳಂಭವಾದಲ್ಲಿ ಅಂತಹ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಸ್ಪರ್ಧಾತ್ಮಕ ಪರೀಕ್ಷೆ/ಮೌಖಿಕ ಸಂದರ್ಶನ ನಡೆಸಲು ಅವಕಾಶಗಳಿರುವುದಿಲ್ಲ.

**16. ಮೂಲ ದಾಖಲಾತಿಗಳ ಪರಿಶೀಲನೆ:-**

ಮೌಖಿಕ ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳ ಕೆಳಕಂಡ ಮೂಲ ದಾಖಲಾತಿಗಳನ್ನು ಸಂದರ್ಶನದ ದಿನಾಂಕದಂದು ಪರಿಶೀಲನೆ ಮಾಡಲಾಗುವುದು.

1) ಪ್ರತಿ ವರ್ಷದ ಕಾನೂನು ಪದವಿಯ ಅಂಕಪಟ್ಟಿಗಳು.
2) ಭಾರತ ದೇಶದ ಮಾನ್ಯತೆ ಪಡೆದ ಯಾವುದೇ ವಕೀಲಿ ವೃತ್ತಿ ನಡೆಸುವ ಬಗ್ಗೆ ಪಡೆದ ಸನ್ನದು. (ವಕೀಲರ ಪರಿಷತ್ತಿನಿಂದ ಪಡೆದ ನೋಂದಣಿ ಪ್ರಮಾಣ ಪತ್ರ).

3) ಜನ್ಮ ದಿನಾಂಕವಿರುವ ಎಸ್.ಎಸ್.ಎಲ್. ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಗಳು.
4) ವಕೀಲ ವೃತ್ತಿ ನಡೆಸುತ್ತಿರುವ ಬಗ್ಗೆ ಸಂಬಂಧಪಟ್ಟ ನ್ಯಾಯಾಲಯಗಳ ಮಾನ್ಯ ಪೀಠಾಧಿಕಾರಿಯವರಿಂದ ಪಡೆದಿರುವ ಪ್ರಮಾಣ ಪತ್ರ.
5) ಕಾನೂನು ಕಾಲೇಜಿನಿಂದ ಉತ್ತಮ ನಡವಳಿಕೆ ಬಗ್ಗೆ ಪಡೆದ ಪ್ರಮಾಣ ಪತ್ರ.
6) ಉತ್ತಮ ನಡವಳಿಕೆ ಬಗ್ಗೆ ಇಬ್ಬರು ಗಣ್ಯವ್ಯಕ್ತಿಗಳು ನೀಡಿದ ಪ್ರಮಾಣ ಪತ್ರ.
7) ಗ್ರಾಮೀಣ ಅಭ್ಯರ್ಥಿಯಾಗಿದ್ದಲ್ಲಿ 1 ರಿಂದ 10ನೇ ತರಗತಿಯವರೆಗೆ ಅಭ್ಯಸಿಸಿದ ಬಗ್ಗೆ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರ, ಈ ಪ್ರಮಾಣ ಪತ್ರಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ಸಹಿ, ಮೊಹರು ಇರಬೇಕು. ಸಾಮಾನ್ಯ ವರ್ಗಕ್ಕೆ ಸೇರಿದವರು ನಮೂನೆ-1 ನ್ನು ಹೆಚ್ಚುವರಿಯಾಗಿ ಪಡೆದು ಪರಿಶೀಲನೆ ಸಂದರ್ಭದಲ್ಲಿ ಹಾಜರಪಡಿಸಬೇಕು.
8) ಮಾಜಿ ಸೈನಿಕರಾಗಿದ್ದಲ್ಲಿ ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿದ ಅಥವಾ ಸೇವೆ ಮುಕ್ತಾಯಗೊಳಿಸಿದ ಬಗೆಗಿನ ಪ್ರಮಾಣ ಪತ್ರ.
9) ಜಾತಿ ಮತ್ತು ಆದಾಯದ ಅನ್ವಯ ಮೀಸಲಾತಿ ಸೌಲಭ್ಯವನ್ನು ಪಡೆಯಲಿಚ್ಛಿಸಿರುವವರು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
10) ಹೈದರಾಬಾದ್-ಕರ್ನಾಟಕ ಮೀಸಲಾತಿ ಸೌಲಭ್ಯ ಪಡೆಯುವವರು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ನಿಗದಿತ ನಮೂನೆಯಲ್ಲಿ ಪಡೆದ ಪ್ರಮಾಣ ಪತ್ರಗಳು.
11) ವಿಧವೆಯಾಗಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
12) ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ದಿನಾಂಕ: 19-11-2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ ಪಿ 2010, ದಿನಾಂಕ: 18-02-2011 ರಂತೆ ಪಡೆದ ಪ್ರಮಾಣ ಪತ್ರ.
13) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಂತರ್ಜಾಲದ ಮೂಲಕ ಡೌನ್ ಲೋಡ್ ಮಾಡಿದ ಅರ್ಜಿಯ ಪ್ರತಿ.
14) ಪರೀಕ್ಷಾ ಶುಲ್ಕ ಪಾವತಿಯ ಚಲನ್ ನ ಪ್ರತಿ.

ಮೇಲ್ಕಂಡ ಮೂಲ ದಾಖಲಾತಿಗಳನ್ನು ಅನುಕ್ರಮವಾಗಿ ಸಂದರ್ಶನ ಸಮಯದಲ್ಲಿ ಪರಿಶೀಲನೆಗೆ ಹಾಜರುಪಡಿಸುವುದು ಹಾಗೂ ಮೇಲ್ಕಂಡ ಎಲ್ಲಾ ದಾಖಲಾತಿಗಳನ್ನು ಅನುಕ್ರಮವಾಗಿ ಸ್ವಯಂ ದೃಢೀಕರಿಸಿ ಪ್ರತಿಯೊಂದು ದಾಖಲೆಯ ಒಂದೊಂದು ಪ್ರತಿಯನ್ನು ಸಂದರ್ಶನದ ಸಮಯದಲ್ಲಿ ನೇಮಕಾತಿ ಸಮಿತಿಗೆ ನೀಡತಕ್ಕದ್ದು.

**17. ಪರೀಕ್ಷಾರ್ಥ ಅವಧಿ:-**

1. ಆಯ್ಕೆಯಾದ ಅಭ್ಯರ್ಥಿಗಳನ್ನು ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯು ಕರ್ನಾಟಕ ರಾಜ್ಯದಾದ್ಯಂತ ಯಾವುದೇ ಪ್ರದೇಶಗಳಿಗೆ ಸ್ಥಳ ನಿಯುಕ್ತಿಗೊಳಿಸುವಂತಹ ಅಧಿಕಾರ ಹೊಂದಿರುತ್ತದೆ. ನೇಮಕಾತಿ ಹೊಂದಿದ ಅಭ್ಯರ್ಥಿಯು ಕರ್ನಾಟಕ ನಾಗರೀಕ ಸೇವಾ (ಪರೀಕ್ಷಾರ್ಥ ಸೇವೆ) 1977ರ ನಿಯಮದ ಅನುಸಾರ **2 ವರ್ಷಗಳ ಪರೀಕ್ಷಾರ್ಥ** (Probationary) ಅವಧಿಯಲ್ಲಿರುತ್ತಾರೆ.
2. ನೇಮಕಗೊಂಡ ಅಭ್ಯರ್ಥಿಯು ನಿಗದಿಗೊಳಿಸಿದ ವಿದ್ಯಾರ್ಹತೆಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದಲ್ಲಿ ಹೆಚ್ಚಿನ ವಿದ್ಯಾರ್ಹತೆಯ ಆಧಾರದ ಅಡಿಯಲ್ಲಿ ಉನ್ನತ ಹುದ್ದೆಗೆ ಅವರ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

**18. ಇಲಾಖೆಯ ಜೊತೆ ಪತ್ರ ವ್ಯವಹಾರ:-**

**ಇಲಾಖೆಯು ಅಭ್ಯರ್ಥಿಗಳೊಂದಿಗೆ ಯಾವುದೇ ರೀತಿಯ ಪತ್ರ ವ್ಯವಹಾರ ನಡೆಸುವುದಿಲ್ಲ. ಆದುದರಿಂದ ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಸರಿಯಾಗಿ ಪರಿಶೀಲಿಸಿ ಭರ್ತಿ ಮಾಡತಕ್ಕದ್ದು.**

ಅರ್ಜಿ ಸಲ್ಲಿಸಿದ ನಂತರ ಅಭ್ಯರ್ಥಿಯ ವಿಳಾಸ ಬದಲಾವಣೆಯಾದಲ್ಲಿ ಮಾತ್ರ ಅಭ್ಯರ್ಥಿಗಳು ಲಿಖಿತವಾಗಿ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸುವುದು ನೇಮಕಾತಿ ಸಮಿತಿಯ ವಿವೇಚನೆಗೆ ಒಳಪಟ್ಟಿರುತ್ತದೆ. ವಿಳಾಸ ಬದಲಾದ ಸಂದರ್ಭದಲ್ಲಿ ಅಭ್ಯರ್ಥಿಗಳಿಗೆ ಆಗುವ ತೊಂದರೆಗಳಿಗೆ ನೇಮಕಾತಿ ಸಮಿತಿಯು ಯಾವುದೇ ರೀತಿಯಲ್ಲಿ ಜವಾಬ್ದಾರಿಯಾಗುವುದಿಲ್ಲ, ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ನೇಮಕಾತಿ ಸಮಿತಿಯ ಜೊತೆ ಸಂಪರ್ಕಿಸಲೇಬೇಕಾದ ವಿಶೇಷ ಸಂದರ್ಭದಲ್ಲಿ ಕಛೇರಿ ಕೆಲಸದ ದಿನಗಳಂದು ಕಛೇರಿ ವೇಳೆಯಲ್ಲಿ ಸದಸ್ಯ ಕಾರ್ಯದರ್ಶಿಯವರ ಆಪ್ತ ಶಾಖೆ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖಾ ನಿರ್ದೇಶಕರ ಕಛೇರಿ, ಕಾವೇರಿ ಭವನ, ಕೆ.ಹೆಚ್.ಬಿ ಕಾಂಪ್ಲೆಕ್ಸ್, 6ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು-560 ೦೦೯. ರವರನ್ನು ಸಂಪರ್ಕಿಸಬಹುದಾಗಿದೆ. ವಿಳಾಸ ಬದಲಾವಣೆ ಸಂದರ್ಭದಲ್ಲಿ ಈ ಕೆಳಕಂಡ ಮಾಹಿತಿಗಳನ್ನು ತಪ್ಪದೇ ನೀಡುವುದು.

1. ವಿಳಾಸದ ವಿವರ (ದಾಖಲೆ ಪ್ರತಿ ಸಹಿತ)
2. ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)
3. ಅರ್ಜಿಯಲ್ಲಿ ನಮೂದಿಸಿರುವ ಅಂಚೆ/ಇ-ಮೇಲ್ ವಿಳಾಸ

**19.ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

ಅಭ್ಯರ್ಥಿಗಳು ಇಲಾಖೆಯ ಅಧಿಕೃತ ವೆಬ್ ಸೈಟ್ **https://www.karnataka.gov.in/Prosecution** ನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ **"Application for the post of Assistant Public Prosecutor-cum-Assistant Government Pleader "** ಎಂದು ಬಿಂಬಿಸುತ್ತದೆ. ಇದಲ್ಲದೆ, ಪರದೆಯಲ್ಲಿ ಅಧಿಸೂಚನೆ, ಭಾವಚಿತ್ರ ಮತ್ತು ಸಹಿ ಹಾಗೂ ಎಡಗೈ ಹೆಬ್ಬೆಟ್ಟಿನ ಗುರುತನ್ನು ಹಾಗೂ ಇತರೆ ದಾಖಲಾತಿಗಳನ್ನು Upload ಮಾಡುವ ಲಿಂಕ್ ಗಳು ಕಂಡುಬರುತ್ತದೆ. ಅರ್ಜಿ ಭರ್ತಿ ಮಾಡುವ ಮುನ್ನ ಅಧಿಸೂಚನೆ/ಪರೀಕ್ಷಾ ಶುಲ್ಕ ಇತ್ಯಾದಿ ವಿವರಗಳು ಲಭ್ಯವಾಗಲಿದ್ದು, ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ವಿವರಗಳನ್ನು ಮತ್ತು ಅರ್ಜಿ ಸಲ್ಲಿಸುವ ಸೂಚನೆಗಳನ್ನು ತಪ್ಪದೇ ಓದಿಕೊಂಡು ಅದರಂತೆ, ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ವೆಬ್ ಸೈಟ್ ನಲ್ಲಿ ಲಭ್ಯವಿರುವ ಅರ್ಜಿ ನಮೂನೆಯಲ್ಲಿಯೇ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸತಕ್ಕದ್ದು. ಇತರ ಯಾವುದೇ ನಮೂನೆಯಲ್ಲಿ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಒಂದು ಸ್ವಚ್ಛವಾದ ಬಿಳಿಯ ಹಾಳೆಯ ಮೇಲೆ ಲಗತ್ತಿಸಿ ಅದರ ಕೆಳಗೆ ಕಪ್ಪು ಶಾಯಿಯ ಸ್ಕೆಚ್/ಮಾರ್ಕರ್ ಪೆನ್ನಿನಿಂದ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತನ್ನು ಮಾಡಿ (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತನ್ನು ಮಾಡಬಾರದು) ನಂತರ ಭಾವಚಿತ್ರ (PHOTO) ಮತ್ತು ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತನ್ನು ಒಳಗೊಂಡಂತೆ ಈ ಕೆಳಗಿನ ಅಳತೆ ಪ್ರಕಾರ ಸ್ಕ್ಯಾನ್ ಮಾಡಿ ಇಟ್ಟುಕೊಂಡಿರತಕ್ಕದ್ದು.

| | |
|---|---|
| • ಫೈಲ್ ಅಳತೆ - 100 ಕೆಬಿ | ಪಾಸ್ ಪೋರ್ಟ್ ಭಾವಚಿತ್ರದ ಅಳತೆಗಳು:<br>45 ಎಂಎಂ (ಉದ್ದ) X 35 ಎಂಎಂ (ಅಗಲ)<br><br>: ಸಹಿ ಅಳತೆ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು<br>20 ಎಂಎಂ (ಉದ್ದ) X 35 ಎಂಎಂ (ಅಗಲ) |
| • ಡಿಪಿಐ ಹಿನ್ನಲೆ = 100 ಡಿಪಿಐ | |
| • ಇಮೇಜ್ ಅಳತೆ = 100% | |
| • ಕಲರ್ | |
| • ಪಿಎನ್ ಜಿ (png) / ಜೆಪಿಇಜಿ (jpeg) | |

ನಂತರ Document Upload button ಅನ್ನು ಒತ್ತಿ ಆನ್ ಲೈನ್ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ, ಕ್ರಮ ಕೈಗೊಳ್ಳುವುದು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸುವುದು ಸೂಕ್ತ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

ಅಭ್ಯರ್ಥಿಗಳು ಕರ್ನಾಟಕ ರಾಜ್ಯದಾದ್ಯಂತ ಇಲಾಖೆಯ ಅಧೀನದಲ್ಲಿ ಬರುವ ಯಾವುದೇ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸಲು ಬದ್ದರಾಗಿರತಕ್ಕದ್ದು.

**<u>20. ಅಭ್ಯರ್ಥಿಗಳಿಗೆ ಪ್ರಮುಖ ಸೂಚನೆಗಳು:-</u>**

ಅಭ್ಯರ್ಥಿಯ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಯಿಯ ಸ್ಕೆಚ್/ಮಾರ್ಕರ್ ಪೆನ್ನಲ್ಲಿ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತನ್ನು ಮಾಡಿ ಇದನ್ನು ಸ್ಕ್ಯಾನ್ ಮಾಡಿ ಅರ್ಜಿಗೆ Upload ಮಾಡಬೇಕು. ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ON-LINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳು ಮತ್ತು ಇತರೆ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅದೇ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ದಾಖಲಾತಿಗಳನ್ನು ಪರಿಶೀಲನೆಯ ಸಂದರ್ಭದಲ್ಲಿ ತಪ್ಪದೇ ಹಾಜರುಪಡಿಸಬೇಕು. ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ ಅಂತಹವರ ಮೀಸಲಾತಿಯನ್ನು/ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

**<u>21. ದುರ್ನಡತೆ:-</u>**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಾಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರಿಶೀಲನೆ ಪ್ರಕ್ರಿಯೆಯ ಸಂದರ್ಭದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು

ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸುವುದಲ್ಲದೇ, ಆಯ್ಕೆಗೆ ಕೂಡಾ ಪರಿಗಣಿಸಲಾಗುವುದಿಲ್ಲ.

- ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಕುರಿತು ಯಾವುದೇ ಮಾಹಿತಿ ಅಥವಾ ಮಾರ್ಗದರ್ಶನದ ಅಗತ್ಯವಿದ್ದಲ್ಲಿ ಈ ಕೆಳಕಂಡ ಸಹಾಯ ವಾಣಿ (help desk) ಕೇಂದ್ರಗಳನ್ನು ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ, ಕಛೇರಿಯ ಕೆಲಸದ ವೇಳೆಯಲ್ಲಿ ಮಾತ್ರ ಸಂಪರ್ಕಿಸಬಹುದಾಗಿದೆ.

| | |
|---|---|
| **ಮಾಹಿತಿ ಕೇಂದ್ರಗಳು**<br>ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖಾ ನಿರ್ದೇಶಕರ ಕಛೇರಿ, ಕಾವೇರಿ ಭವನ, ಕೆ ಹೆಚ್ ಬಿ ಕಾಂಪ್ಲೆಕ್ಸ್, 6ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು-560 009. | **080-22213856** |
| ಕಾನೂನು ಅಧಿಕಾರಿಗಳು (ಹಿರಿಯ) ಕಛೇರಿ, ಮೈಸೂರು ವಲಯ,<br>ಸರ್ಕಾರಿ ಅಭಿಯೋಜಕರ ಕಛೇರಿ ಸಂಕೀರ್ಣ, ಪಂಪಾಪತಿ ರಸ್ತೆ, ಸರಸ್ವತಿ ಪುರಂ, ಮೈಸೂರು-570 009 | **0821-2431699** |
| ಕಾನೂನು ಅಧಿಕಾರಿಗಳು (ಹಿರಿಯ) ಕಛೇರಿ,<br>ದಾವಣಗೆರೆ ವಲಯ, ಐಜಿಪಿ ಕಛೇರಿ ಆವರಣ, ದೇವರಾಜ ಅರಸ್ ಬಡಾವಣೆ, ದಾವಣಗೆರೆ-577006 | **08192-230399** |
| ಕಾನೂನು ಅಧಿಕಾರಿಗಳು (ಹಿರಿಯ) ಕಛೇರಿ,<br>ಮಂಗಳೂರು ವಲಯ, ಜಿಲ್ಲಾ ಪೊಲೀಸ್ ಕಛೇರಿ ಆವರಣ, ಮಂಗಳೂರು-575001 | **0824-2220560** |
| ಕಾನೂನು ಅಧಿಕಾರಿಗಳು (ಹಿರಿಯ) ಕಛೇರಿ,<br>ಬೆಳಗಾವಿ ವಲಯ,ಪೊಲೀಸ್ ಭವನ, ಹಳೆ ಪಿ.ಬಿ ರಸ್ತೆ,<br>ಸುಭಾಷ್ ನಗರ ಕ್ರಾಸ್, ಬೆಳಗಾವಿ-590016 | **0831-2471340** |
| ಕಾನೂನು ಅಧಿಕಾರಿಗಳು (ಹಿರಿಯ) ಕಛೇರಿ,<br>ಕಲಬುರಗಿ ವಲಯ, ಪೊಲೀಸ್ ಭವನ, ಕಲಬುರಗಿ- | **08472-221087** |

**( ಹೆಚ್.ಕೆ. ಜಗದೀಶ್ )**
ಸದಸ್ಯ ಕಾರ್ಯದರ್ಶಿ,
ಸ.ಸ.ಅ-ವ-ಸ.ಸ.ವ ನೇಮಕಾತಿ ಸಮಿತಿ ಹಾಗೂ
